ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 68
ಸದಸ್ಯರ ಹೆಸರು : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ.
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 13-09-2021
ಉತ್ತರಿಸುವ ಸಚಿವರು : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ನಮ್ಮ ನಾಡಿನ ಪಾರಂಪರಿಕ ಕಲೆಗಳಾದ ಕಂಸಳೆ, ಚೌಡಿಕೆ, ವೀರಭದ್ರಕುಣಿತ ಡೋಲು ಬಡಿತ, ನಾದಸ್ವರ ಕಲಿಕೆಯಂತಹ ಕಲೆಗಳನ್ನು ಉಳಿಸುವ ಮತ್ತು ಬೆಳೆಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳು ಯಾವುದಾದರೂ ಇವೆಯೇ (ಇದ್ದಲ್ಲಿ ಮಾಹಿತಿ ನೀಡುವುದು)	ನಮ್ಮ ನಾಡಿನ ಪಾರಂಪರಿಕ ಕಲೆಗಳಾದ ಕಂಸಾಳೆ, ಚೌಡಿಕೆ, ವೀರಭದ್ರಕುಣಿತ ಡೋಲು ಬಡಿತ, ನಾದಸ್ವರ ಕಲಿಕೆಯಂತಹ ಕಲೆಗಳನ್ನು ಉಳಿಸುವ ಮತ್ತು ಬೆಳೆಸುವ ನಿಟ್ಟಿನಲ್ಲಿ ಗುರುಶಿಷ್ಯ ಪರಂಪರೆ ಯೋಜನೆಯನ್ನು ರೂಪಿಸಿ ಪಾರಂಪರಿಕ ಕಲೆಗಳನ್ನು ಬೆಳೆಸಲು ಎಲ್ಲಾ ಜಿಲ್ಲೆಗಳಲ್ಲಿ ತರಬೇತಿಗಳನ್ನು ಏರ್ಪಡಿಸಲಾಗುತ್ತಿದೆ. ಇಲಾಖೆಯಿಂದ ಹಮ್ಮಿಕೊಳ್ಳುವ ಉತ್ಸವಗಳು, ಜಯಂತಿ, ಜನಪರ/ಗಿರಿಜನ ಉತ್ಸವ, ರಾಜ್ಯೋತ್ಸವ, ಯುವಸೌರಭ, ಚಿಗುರು ಇತ್ಯಾದಿ ಕಾರ್ಯಕ್ರಮಗಳಲ್ಲಿ ಪಾರಂಪರಿಕ ಕಲೆಗಳಿಗೆ ಪ್ರೋತ್ಸಾಹ ನೀಡಿ ವೇದಿಕೆ ಕಲ್ಪಿಸಿ ನಿಯಮಾನುಸಾರ ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತಿದೆ. ಕರ್ನಾಟಕ ಜಾನಪದ ಅಕಾಡೆಮಿಯಲ್ಲಿ ಜನಪದ ಕಲೆಗಳಾದ ಕಂಸಾಳೆ, ಚೌಡಿಕೆ, ವೀರಭದ್ರ ಕುಣಿತ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ತರಬೇತಿ ಶಿಬಿರಗಳನ್ನು ನಡೆಸಲಾಗುತ್ತಿದೆ. ತರಬೇತಿ ಪಡೆದ ತಂಡಗಳಿಗೆ ರಾಜ್ಯದ ವಿವಿಧ ಭಾಗಗಳಲ್ಲಿ ಕಾರ್ಯಕ್ರಮಗಳನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುತ್ತಿದೆ. ಪಾರಂಪರಿಕ ಕಲೆಗಳನ್ನು ಮುಂದುವರೆಸುತ್ತಿರುವ ಕಲಾವಿದರುಗಳಿಗೆ ವಾದ್ಯಪರಿಕರ/ ವೇಷಭೂಷಣ ಖರೀದಿಸಲು ಸೇವಾಸಿಂಧುವಿನಲ್ಲಿ ಅರ್ಜಿಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಪ್ರೋತ್ಸಾಹಧನವನ್ನು ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.
ಆ.	ಡೋಲುಬಡಿತ, ನಾದಸ್ವರದ ಕಲಿಕೆಗೆ ಹೆಚ್ಚಿನ ಬೇಡಿಕೆಯಿದ್ದು ಇದನ್ನು ಕಲಿಸುವ ಶಾಲೆಗಳನ್ನು ಜಿಲ್ಲೆಗೊಂದರಂತೆ ಸ್ಥಾಪಿಸಲು ಹಾಗೂ ಇವುಗಳ ಬಗ್ಗೆ ಹೆಚ್ಚಿನ ಅಧ್ಯಯನವನ್ನು ಮಾಡಿ ಕಲೆಗಳನ್ನು ಉಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು)	ಅನ್ವಯಿಸುವುದಿಲ್ಲ.

ಕಡತ ಸಂಖ್ಯೆ: ಕಸಂವಾ 51 ಕವಿಸ 2021

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.